ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟಿರುವ ಉನ್ನತ ಶಿಕ್ಷಣ ಇಲಾಖೆಯಡಿ ಬರುವ 07 ವಿಶ್ವವಿದ್ಯಾಲಯಗಳು 2023-24ನೇ ಸಾಲಿನಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ 59ರಡಿ ಸಂಯೋಜನಾ ಪ್ರಸ್ತಾವನೆಗಳನ್ನು UUCMS ತಂತ್ರಾಂಶದಲ್ಲಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 34 ಇಜಿಓವಿ 2020 (ಭಾಗ-2), ದಿನಾಂಕ:26.04.2022.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 47 ಯುಎನ್ಇ 2023, ದಿನಾಂಕ: 05.04.2023.

**ಪ್ರಸ್ತಾವನೆ:-**

ಮೇಲೆ ಓದಲಾದ (2) ಆದೇಶದಲ್ಲಿ ಮೇಲ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶದ ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ರಂತೆ ಆಹ್ವಾನಿಸಲು, ಉನ್ನತ ಶಿಕ್ಷಣ ಇಲಾಖೆಯಡಿಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ Opening new colleges, Extension of existing affiliation, Continuation of affiliation, Permanent affiliation, Change/Addition of subject, Division of faculty, Increase of intake, Change of name, Change of place, Closure and withdrawal of a college, Local inquiry committee formation and Transfer of management ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ವಿವಿಧ ಸಂಯೋಜನೆಗೆ ಸಂಬಂಧಿಸಿದ ಶುಲ್ಕಗಳನ್ನು ತಂತ್ರಾಂಶದಲ್ಲಿ ನಿಗದಿಪಡಿಸಿ ಸರ್ಕಾರಕ್ಕೆ ದಿನಾಂಕ: 30.04.2023 ರೊಳಗಾಗಿ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಲಾಗಿತ್ತು.

ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ರಾಜ್ಯದಲ್ಲಿ ಬೀದರ್ ವಿಶ್ವವಿದ್ಯಾಲಯ, ಹಾವೇರಿ ವಿಶ್ವವಿದ್ಯಾಲಯ, ಹಾಸನ ವಿಶ್ವವಿದ್ಯಾಲಯ, ಚಾಮರಾಜನಗರ ವಿಶ್ವವಿದ್ಯಾಲಯ, ಕೊಪ್ಪಳ ವಿಶ್ವವಿದ್ಯಾಲಯ, ಬಾಗಲಕೋಟೆ ವಿಶ್ವವಿದ್ಯಾಲಯ ಮತ್ತು ಕೊಡಗು ವಿಶ್ವವಿದ್ಯಾಲಯಗಳನ್ನು 7 ಜಿಲ್ಲೆಗಳಲ್ಲಿ ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 19 ಶಾಸನ 2022, ದಿನಾಂಕ: 10.10.2022ರಲ್ಲಿ ಆದೇಶಿಸಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ 2022ಕ್ಕೆ ಗೌರವಾನ್ವಿತ ರಾಜ್ಯಪಾಲರ ಅನುಮೋದನೆ ಪಡೆದು ಇದನ್ನು 2022ರ ಕರ್ನಾಟಕ ಅಧಿನಿಯಮ ಸಂಖ್ಯೆ: 26 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರ ವಿಶೇಷ ಸಂಚಿಕೆಯಲ್ಲಿ (ಭಾಗ IV) ದಿನಾಂಕ: 10.10.2022ರಂದು ಪ್ರಕಟಿಸಿ ಆದೇಶಿಸಲಾಗಿದೆ. ಸದರಿ 7 ವಿಶ್ವವಿದ್ಯಾಲಯಗಳಿಗೆ 2023-24ನೇ ಸಾಲಿನಿಂದಲೇ ಅನ್ವಯಿಸುವಂತೆ ಶೈಕ್ಷಣಿಕ ಕಾರ್ಯಕ್ರಮಗಳನ್ನು ಪ್ರಾರಂಭಿಸಲು, ಕುಲಪತಿಗಳು ಹಾಗು ಕುಲಸಚಿವರುಗಳ ನೇಮಕಾತಿಯನ್ನು ಮಾಡಲಾಗಿದೆ ಹಾಗೂ ಏಕೀಕೃತ ಮಂಡ್ಯ ವಿಶ್ವವಿದ್ಯಾಲಯವನ್ನು, ಸಂಯೋಜಿತ ವಿಶ್ವವಿದ್ಯಾಲಯವಾಗಿ ಪರಿವರ್ತಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮಂಡ್ಯ ವಿಶ್ವವಿದ್ಯಾಲಯ, ಬೀದರ್ ವಿಶ್ವವಿದ್ಯಾಲಯ, ಕೊಡಗು ವಿಶ್ವವಿದ್ಯಾಲಯ, ಹಾವೇರಿ ವಿಶ್ವವಿದ್ಯಾಲಯ, ಹಾಸನ ವಿಶ್ವವಿದ್ಯಾಲಯ, ಚಾಮರಾಜನಗರ ವಿಶ್ವವಿದ್ಯಾಲಯ, ಕೊಪ್ಪಳ ವಿಶ್ವವಿದ್ಯಾಲಯ, ಬಾಗಲಕೋಟೆ ವಿಶ್ವವಿದ್ಯಾಲಯ ಮತ್ತು ಹಾವೇರಿ ವಿಶ್ವವಿದ್ಯಾಲಯಗಳ ಭೌಗೋಳಿಕ ವ್ಯಾಪ್ತಿಗೆ ಬರುವ ಸಂಯೋಜಿತ ಕಾಲೇಜುಗಳನ್ನು ಆಯಾ ಜಿಲ್ಲೆಗಳಿಗೆ ಸೀಮಿತಗೊಳಿಸಿ ಮಾತೃ ವಿಶ್ವವಿದ್ಯಾಲಯಗಳಿಂದ ನೂತನ ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸಬೇಕಾಗಿರುತ್ತದೆ. ಕಾಲೇಜುಗಳನ್ನು ವರ್ಗಾಯಿಸುವಾಗ ಪ್ರಸಕ್ತ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶಾತಿಯನ್ನು ಪಡೆಯುವ ವಿದ್ಯಾರ್ಥಿಗಳಿಗೆ ಮಾತ್ರ ಹೊಸ ವಿಶ್ವವಿದ್ಯಾಲಯ UUCMS ಪ್ರಕ್ರಿಯೆಗಳು ಲಭ್ಯವಾಗುವಂತೆ ಮಾಡಿ, ಕಾಲೇಜುಗಳಲ್ಲಿ ಅಧ್ಯಯನ ಮಾಡುತ್ತಿರುವ ಹಿಂದಿನ ವಿದ್ಯಾರ್ಥಿಗಳ ದತ್ತಾಂಶವು ಹಳೆಯ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವಂತೆ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಈ ಪ್ರಕ್ರಿಯೆಯನ್ನು ಪ್ರಾರಂಭಿಸುವ ಪೂರ್ವದಲ್ಲಿ ಹೊಸ ವಿಶ್ವವಿದ್ಯಾಲಯಗಳಿಗೆ UUCMS ತಂತ್ರಾಂಶದಲ್ಲಿ Admin, Registrar, RE, FO, etc ಮುಂತಾದ login credentials ಗಳನ್ನು ಸೃಜಿಸಿ ನೀಡಬೇಕಾಗಿರುತ್ತದೆ.

ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಮತ್ತು ಆಡಳಿತ ಚಟುವಟಿಕೆಗಳು ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ಅಡಿಯಲ್ಲಿ ಕಾರ್ಯನಿರ್ವಯಿಸುವ ನಿಟ್ಟಿನಲ್ಲಿ ಪ್ರಸಕ್ತ 2023-24 ನೇ ಸಾಲಿನಿಂದಲೇ ಹೊಸ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಯನ್ನು ಆಯಾ ಹೊಸ ವಿಶ್ವವಿದ್ಯಾಲಯಗಳೇ ನಿರ್ವಹಿಸುವಂತೆ ತೀರ್ಮಾನಿಸಿ, ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 47 ಯುಎನ್ಇ 2023, ಬೆಂಗಳೂರು, ದಿನಾಂಕ: 02.05.2023.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶದ ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ರಂತೆ ಆಹ್ವಾನಿಸಲು, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ನೂತನವಾಗಿ ಪ್ರಾರಂಭಿಸಲ್ಪಟ್ಟ ಬೀದರ್ ವಿಶ್ವವಿದ್ಯಾಲಯ, ಕೊಡಗು ವಿಶ್ವವಿದ್ಯಾಲಯ, ಹಾಸನ ವಿಶ್ವವಿದ್ಯಾಲಯ, ಚಾಮರಾಜನಗರ ವಿಶ್ವವಿದ್ಯಾಲಯ, ಕೊಪ್ಪಳ ವಿಶ್ವವಿದ್ಯಾಲಯ, ಬಾಗಲಕೋಟೆ ವಿಶ್ವವಿದ್ಯಾಲಯ ಮತ್ತು ಹಾವೇರಿ ವಿಶ್ವವಿದ್ಯಾಲಯ ಮತ್ತು ಸಂಯೋಜಿತ ವಿಶ್ವವಿದ್ಯಾಲಯವಾಗಿ ಪರಿವರ್ತಿಸಿದ ಮಂಡ್ಯ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ Opening new colleges, Extension of existing affiliation, Continuation of affiliation, Permanent affiliation, Change/Addition of subject, Division of faculty, Increase of intake, Change of name, Change of place, Closure and withdrawal of a college, Local inquiry committee formation and Transfer of management ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ವಿವಿಧ ಸಂಯೋಜನೆಗೆ ಸಂಬಂಧಿಸಿದ ಶುಲ್ಕಗಳನ್ನು ತಂತ್ರಾಂಶದಲ್ಲಿ ನಿಗದಿಪಡಿಸಿ ದಿನಾಂಕ: 31.05.2023ರೊಳಗಾಗಿ ಸಂಯೋಜನಾ ಪ್ರಸ್ತಾವನೆಯನ್ನು ಈ ಕೆಳಕಂಡ ಷರತ್ತುಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಆದೇಶಿಸಿದೆ.

1. *ಹೊಸ ವಿಶ್ವವಿದ್ಯಾಲಯಗಳಿಗೆ UUCMS ತಂತ್ರಾಂಶದಲ್ಲಿ Admin, Registrar, RE, FO, etc ಮುಂತಾದ login credentials ಗಳನ್ನು ಸೃಜಿಸಿಕೊಳ್ಳಲು ಅಗತ್ಯ ಕ್ರಮವಹಿಸತಕ್ಕದ್ದು.*
2. *ನೂತನವಾಗಿ ಸ್ಥಾಪಿಸಲ್ಪಟ್ಟ/ಸಂಯೋಜಿತವಾಗಿ ಪರಿವರ್ತಿಸಲ್ಪಟ್ಟ ವಿಶ್ವವಿದ್ಯಾಲಯಗಳು U.G.C. Act of 1956ರ ನಿಯಮ 2(ಎಫ್) ರಡಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಪಟ್ಟಿಯಲ್ಲಿ ಸೇರಿಸುವ ಕುರಿತು ಯುಜಿಸಿಯೊಂದಿಗೆ ಶೀಘ್ರವಾಗಿ ಅಗತ್ಯ ಕ್ರಮವಹಿಸುವುದು.*

....3

ಮುಂದುವರೆದು, ನೂತನವಾಗಿ ಪ್ರಾರಂಭಿಸಲ್ಪಟ್ಟ ವಿಶ್ವವಿದ್ಯಾಲಯಗಳು 2023-24ನೇ ಶೈಕ್ಷಣಿಕ ಸಾಲಿನಿಂದ ಪದವಿ ಮತ್ತು ಸ್ನಾತಕೋತ್ತರ ಪದವಿ ಪ್ರವೇಶಾತಿಗಳನ್ನು ಪ್ರಾರಂಭಿಸಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.05.2023

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟಿರುವ ಉನ್ನತ ಶಿಕ್ಷಣ ಇಲಾಖೆಯಡಿ ಬರುವ 07 ವಿಶ್ವವಿದ್ಯಾಲಯಗಳು 2023-24ನೇ ಸಾಲಿನಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ 59 ರಡಿ ಸಂಯೋಜನಾ ಪ್ರಸ್ತಾವನೆಗಳನ್ನು ಯುಯುಸಿಎಂಎಸ್ ತಂತ್ರಾಂಶದಲ್ಲಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ ಸರ್ಕಾರದಿಂದ ಹೊರಡಿಸಲಾಗಿರುವ ಆದೇಶ ಸಂಖ್ಯೆ: ಇಡಿ 47 ಯುಎನ್ಇ 2023, ಬೆಂಗಳೂರು ದಿನಾಂಕ:02.05.2023ನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ